# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಿಲೀನಗೊಳಿಸುವ ಬಗ್ಗೆ.

**ಓದಲಾಗಿದೆ:**

1) ಜಂಟಿ ನಿರ್ದೇಶಕರು(ಆಡಳಿತ), ಕೃಷಿ ಆಯುಕ್ತರ ಕಾರ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಿಬ್ಬಂದಿ-2/ದ್ವಿದಿಸ/ವಿವ-04/ಇಬ/2014-15, ದಿನಾಂಕ 06.01.2017
2) ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ ಇವರ ಪತ್ರ, ದಿನಾಂಕ 10.02.2017
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಪಂಚಾಯತಿ ಇವರ ಪತ್ರ ಸಂಖ್ಯೆ: ಜಿಪಂಕೊ/ಸಿಬ್ಬಂದಿ-1/ಸಿಆರ್/2016-17, ದಿನಾಂಕ 20.02.2017

***

ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ ಇವರ ಮನವಿಯ ಮೇರೆಗೆ ಸದರಿಯವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಿಲೀನಗೊಳಿಸುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಪಂಚಾಯತಿ ಹಾಗೂ ಕೃಷಿ ಇಲಾಖೆಯ ಸಹಮತಿ ಕೋರಲಾಗಿತ್ತು.

ಮೇಲೆ ಓದಲಾದ (1) ರಲ್ಲಿ ಜಂಟಿ ನಿರ್ದೇಶಕರು(ಆಡಳಿತ), ಕೃಷಿ ಆಯುಕ್ತರ ಕಾರ್ಯಾಲಯ, ಬೆಂಗಳೂರು ಇವರು ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಿಲೀನಗೊಳಿಸಲು ಸಹಮತಿ ನೀಡಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಸದರಿ ನೌಕರರು ದಿನಾಂಕ 25.09.2009 ರಿಂದ 13.04.2015 ರವರೆಗೆ ಕೊಪ್ಪಳ ಜಿಲ್ಲಾ ಪಂಚಾಯತಿಯಲ್ಲಿ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಯಲ್ಲಿ ನಿಯೋಜನೆ ಮೇರೆಗೆ ಕಾರ್ಯ ನಿರ್ವಹಿಸಿದ್ದು, ಈ ಹುದ್ದೆಗೆ ವಿಲೀನಗೊಳಿಸಲು ಹಾಗೂ ಕೊಪ್ಪಳ ಜಿಲ್ಲಾ ಪಂಚಾಯತಿಯ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಜೇಷ್ಠತಾ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿ ಸೇರ್ಪಡೆಯಾಗಲು ಒಪ್ಪಿಗೆ ಇರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಪಂಚಾಯತಿ ಇವರು ಸದರಿ ನೌಕರರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕೊಪ್ಪಳ ಜಿಲ್ಲಾ ಪಂಚಾಯತಿಯ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗೆ ವಿಲೀನಗೊಳಿಸಲು ಸಹಮತಿ ನೀಡಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ದ್ವಿತೀಯ ದರ್ಜೆ ಸಹಾಯಕ ಮತ್ತು ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಎರಡೂ ಹುದ್ದೆಗಳು ವೇತನ ಶ್ರೇಣಿ ಅನುಸಾರ ಸಮಾನಾಂತರ ಹುದ್ದೆಗಳಾಗಿದ್ದು, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 16ಎ(ii) ರನ್ವಯ ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಿಲೀನಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 929 ಗ್ರಾಪಂಅ 2016, ಬೆಂಗಳೂರು, ದಿನಾಂಕ 15.06.2017**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 16ಎ(ii) ರನ್ವಯ ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕೊಪ್ಪಳ ಜಿಲ್ಲಾ ಪಂಚಾಯತಿಯ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗೆ ವಿಲೀನಗೊಳಿಸಿ ಆದೇಶಿಸಿದೆ.

ನೌಕರರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಪಂಚಾಯತಿ, ಕೊಪ್ಪಳ ಇವರಲ್ಲಿ ಕಾರ್ಯ ವರದಿ ಮಾಡಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಪಂಚಾಯತಿ, ಕೊಪ್ಪಳ.
4) ಜಂಟಿ ನಿರ್ದೇಶಕರು(ಆಡಳಿತ), ಕೃಷಿ ಆಯುಕ್ತರ ಕಾರ್ಯಾಲಯ, ಬೆಂಗಳೂರು.
5) ಶ್ರೀ ಮಂಜುನಾಥ ಅಂಗಡಿ, ದ್ವಿತೀಯ ದರ್ಜೆ ಸಹಾಯಕ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಗಂಗಾವತಿ, ಕೊಪ್ಪಳ ಜಿಲ್ಲೆ.
6) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.